# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆಸಂಖ್ಯೆ | : | 701 (718) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಆರ್.ಬಿ.ತಿಮ್ಮಾಪೂರ (ವಿಧಾನ ಸಭೆಯಿಂದ ಚುನಾಯಿತರಾದವರು) |
| ವಿಷಯ | : | ಪ್ರವಾಸಿ ತಾಣಗಳನ್ನು ಅಭಿವೃದ್ಧಿ ಪಡಿಸುವ ಬಗ್ಗೆ. |
| ಉತ್ತರಿಸುವ ದಿನಾಂಕ | : | 25-09-2020. |
| ಉತ್ತರಿಸುವ ಸಚಿವರು | : | ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಚಾಮರಾಜನಗರ ಜಿಲ್ಲೆಯ ಭರಚುಕ್ಕಿ ಜಲಪಾತ ಮತ್ತು ಮಂಡ್ಯ ಜಿಲ್ಲೆಯಲ್ಲಿರುವ ಗಗನಚುಕ್ಕಿ ಜಲಪಾತಗಳು ಪ್ರವಾಸಿಗರ ಆಕರ್ಷಣೀಯ ತಾಣಗಳಾಗಿದ್ದು, ಈ ತಾಣಗಳಿಗೆ ಪ್ರತಿನಿತ್ಯ ಸಾವಿರಾರು ಪ್ರವಾಸಿಗರು ಭೇಟಿ ನೀಡುವುದರಿಂದ ಪ್ರವಾಸಿಗರ ಅನುಕೂಲಕ್ಕಾಗಿ ಹೆಚ್ಚುವರಿ ಪ್ರವಾಸಿ ಸೌಲಭ್ಯಗಳನ್ನು ರೂ.5.00 ಕೋಟಿ ವೆಚ್ಚದಲ್ಲಿ ಕೈಗೊಳ್ಳಲು ಉದ್ದೇಶಿಸಿ 2018-19ನೇ ಆಯವ್ಯಯದಲ್ಲಿ ಮಂಡಿಸಿರುವುದು ಸರ್ಕಾರದ ಗಮನದಲ್ಲಿಯೇ; | ಹೌದು. |
| ಆ) | ಈ ಸೌಲಭ್ಯಗಳನ್ನು ಅನುಷ್ಠಾನಕ್ಕೆ ತರಲಾಗಿದೆಯೇ; | ಇಲ್ಲ. |
| ಇ) | ಈ ಸೌಲಭ್ಯ ಇದುವರೆಗೂ ಅನುಷ್ಠಾನಕ್ಕೆ ತರದೆ ಇದ್ದಲ್ಲಿ, ಯಾವಾಗ ಅನುಷ್ಠಾನಕ್ಕೆ ತರಲಾಗುವುದು; ಈ ಬಗ್ಗೆ ಸಂಪೂರ್ಣ ಮಾಹಿತಿನೀಡುವುದು? | 2018-19ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಚಾಮರಾಜನಗರ ಜಿಲ್ಲೆಯ ಭರಚುಕ್ಕಿ ಜಲಪಾತ ಹಾಗೂ ಮಂಡ್ಯ ಜಿಲ್ಲೆಯ ಗಗನಚುಕ್ಕಿ ಜಲಪಾತದ ಅಭಿವೃದ್ಧಿಗೆ ರೂ.500 ಲಕ್ಷಗಳ ಅನುದಾನವನ್ನು ಘೋಷಿಸಿದ್ದು, ಈ ಪೈಕಿ ಭರಚುಕ್ಕಿ ಜಲಪಾತಕ್ಕೆ ರೂ.250ಲಕ್ಷಗಳ ಅನುದಾನವನ್ನು ನಿಗಧಿಪಡಿಸಲಾಗಿತ್ತು. ಈ ಪೈಕಿ ರೂ.100ಲಕ್ಷಗಳನ್ನು ವ್ಯವಸ್ಥಾಪಕ ನಿರ್ದೇಶಕರು, ಕೆಟಿಐಎಲ್, ಬೆಂಗಳೂರು ಇವರಿಗೆ ಬಿಡುಗಡೆ ಮಾಡಲಾಗಿದೆ.<br><br>ಈ ಸಂಬಂಧ ಅರಣ್ಯ ಇಲಾಖೆ, ಮಲೆ ಮಹದೇಶ್ವರ ವನ್ಯಜೀವಿ ವಿಭಾಗ, ಕೊಳ್ಳೇಗಾಲರವರು ರೂ.300ಲಕ್ಷಗಳಿಗೆ ಅಂದಾಜು ಪಟ್ಟಿಯನ್ನು ಪ್ರವಾಸೋದ್ಯಮ ಇಲಾಖೆಗೆ ಸಲ್ಲಿಸಿರುತ್ತಾರೆ. ಮುಂದುವರೆದು ಸದರಿ ಜಲಪಾತ ಪ್ರದೇಶವು ಸರ್ವೆ ನಂ.1ರಲ್ಲಿ ಬರುತ್ತದೆ ಹಾಗೂ ಸದರಿ ಸರ್ವೆ ನಂ.1ರ ಬಗ್ಗೆ ನ್ಯಾಯಾಲಯದಲ್ಲಿ ದಾವೆ ಇರುತ್ತದೆ. ಸದರಿ ಜಮೀನು, ದಾಖಲೆಗಳ ಪ್ರಕಾರ ಸರ್ಕಾರಿ ಜಮೀನು ಎಂದಿದ್ದು, ಅರಣ್ಯ ಇಲಾಖೆಯೊಂದಿಗೆ ಇರುವ ಗೊಂದಲಗಳನ್ನು ಪರಿಹರಿಸಿಕೊಳ್ಳುವವರೆಗೆ |

2.....

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| | | ಸದರಿ ಕಾಮಗಾರಿಗೆ ನೀಡುವ ಆಡಳಿತಾತ್ಮಕ ಅನುಮೋದನೆಯನ್ನು ತಾತ್ಕಾಲಿಕವಾಗಿ ತಡೆಹಿಡಿಯುವಂತೆ ಜಿಲ್ಲಾಧಿಕಾರಿಗಳು, ಚಾಮರಾಜನಗರ ಇವರು ದಿನಾಂಕ:17-08-2020ರಂದು ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ಬೆಂಗಳೂರು ಇವರಿಗೆ ಪತ್ರ ಬರೆದಿರುತ್ತಾರೆ. ಅದರಂತೆ ಜಮೀನು ವಿವಾದ ಇತ್ಯರ್ಥವಾದ ನಂತರ ಕಾಮಗಾರಿಯನ್ನು ಅನುಷ್ಠಾನ ಗೊಳಿಸಲಾಗುವುದು. |

ಕಡತ ಸಂಖ್ಯೆ: ಟಿಓಆರ್ 197 ಟಿಡಿವಿ 2020

(ಸಿ.ಟಿ.ರವಿ)
ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ
ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು